**ಸಾಕ್ಷಿಗೆ ದಿನಾಂಕಃ 04.12.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ ಶ್ರೀ.NBP ರವರಿಂದಃ**

1) ನಾನು ಈ ಪ್ರಕರಣದಲ್ಲಿ **1** ನೇ ಅರ್ಜಿದಾರಳಾಗಿರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಾಕ್ಷ್ಯಕ್ಕೆ ಬದಲಾಗಿ ನಾನು ಈ ದಿನ ನನ್ನ ಸಾಕ್ಷಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ನಾನು ಓದಿ ತಿಳಿದುಕೊಂಡು ನನ್ನ ಸಹಿಯನ್ನು ಮಾಡಿರುತ್ತೇನೆ. ಸದರಿ ಪ್ರಮಾಣ ಪತ್ರವನ್ನು ನನ್ನ ಹೇಳಿಕೆಗೆ ಅನುಸಾರವಾಗಿ ನಮ್ಮ ವಕೀಲರು ಸಿದ್ಧಪಡಿಸಿದ್ದಾರೆ.

2) **ಪ್ರಥಮ ವರ್ತಮಾನ ವರದಿಯನ್ನು** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು, **ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು, ಅಪರಾಧ ವಿವರ ನಮೂನೆಯನ್ನು ನಿ.ಪಿ.**3** ಎಂದು ಮತ್ತು ಕೃತ್ಯ ನಡೆದ ಸ್ಥಳದ ನಕ್ಷೆಯನ್ನು ನಿ.ಪಿ.**4** ಎಂದು ಗುರುತಿಸಿದೆ.

3) **ಶವ ತನಿಖಾ ವರದಿಯನ್ನು** ನಿ.ಪಿ.**5** ಎಂದು, ಶವ ಪರೀಕ್ಷಾ ವರದಿಯನ್ನು ನಿ.ಪಿ.**6** ಎಂದು ಮತ್ತು ಐಎಂವಿ ವರದಿಯನ್ನು ನಿ.ಪಿ.**7** ಎಂದು ಮತ್ತು ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

**ಸೂಚನೆಃ** ನಿ.ಪಿ.**1** ರಿಂದ **8** ಎಂದು ಗುರುತು ಆಗಿರುವ ದಾಖಲೆಗಳು

ದೇವನಹಳ್ಳಿ ಸಂಚಾರ ಪೊಲೀಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

4) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇತರೆ ಅರ್ಜಿದಾರರ ಮೂಲ ಆಧಾರ್ ಕಾರ್ಡ್ ಗಳನ್ನು ಮತ್ತು ಅಪಘಾತದಲ್ಲಿ ಮರಣ ಹೊಂದಿದ ಅಭಿಲಾಶ್ ರವರ ಆಧಾರ್ ಕಾರ್ಡ್ ಮತ್ತು ಮರಣ ಪ್ರಮಾಣ ಪತ್ರವನ್ನು ಮತ್ತು ಇದೇ ದಾಖಲೆಗಳ ಫೋಟೋ ಪ್ರತಿಗಳನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಗಳನ್ನು ಮತ್ತು ಫೋಟೋ ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಗಳನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಗಳನ್ನು ನಿ.ಪಿ.**9** ರಿಂದ **13** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಗಳನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

**ಈ ಹಂತದಲ್ಲಿ ಮತ್ತೆ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಸಾಕ್ಷಿದಾರರು ಸಮಯ ಕೇಳಿದ್ದಾರೆ, ಸಮಯ ನೀಡಿದೆ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.